ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	683
ಸದಸ್ಯರ ಹೆಸರು	:	ಶ್ರೀ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	25-09-2020.
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
(ಅ)	ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬರುವ ಗ್ರಾಮ ಪಂಚಾಯತ್‌ಗಳಿಂದ ಡಿಮ್ಯಾಂಡ್ ಪುಸ್ತಕದನ್ವಯ ಇಲ್ಲಿಯವರೆವಿಗೆ ವಸೂಲಿಯಾಗದೆ ಬಾಕಿ ಇರುವ ತೆರಿಗೆಯ ಮೊತ್ತ ಎಷ್ಟು;	ಕಲಬುರಗಿ ಜಿಲ್ಲೆಯ ಗ್ರಾಮ ಪಂಚಾಯತಿಗಳಿಂದ ಡಿಮ್ಯಾಂಡ್ ಪುಸ್ತಕಗಳಿಂದ ಇಲ್ಲಿಯವರೆಗೆ ವಸೂಲಿಯಾಗದೆ ಬಾಕಿ ಇರುವ ಮೊತ್ತ ರೂ.7243.13 ಲಕ್ಷಗಳು. ಯಾದಗಿರಿ ಜಿಲ್ಲೆಯ ಗ್ರಾಮ ಪಂಚಾಯತಿಗಳಿಂದ ಡಿಮ್ಯಾಂಡ್ ಪುಸ್ತಕಗಳಿಂದ ಇಲ್ಲಿಯವರೆಗೆ ವಸೂಲಿಯಾಗದೆ ಬಾಕಿ ಇರುವ ಮೊತ್ತ ರೂ.2154.71 ಲಕ್ಷಗಳು.
(ಆ)	ಸರ್ಕಾರ ಯಾವ ಮಾನದಂಡದ ಆಧಾರದ ಮೇಲೆ ತೆರಿಗೆ ಪಾವತಿಯ ದರವನ್ನು ನಿಗಧಿಪಡಿಸುತ್ತದೆ;	ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 199 ಮತ್ತು ಅನುಸೂಚಿ-IV ರಂತೆ ಗ್ರಾಮ ಪಂಚಾಯತಿ ಪ್ರದೇಶದ ಪರಿಮಿತಿಗಳೊಳಗಿರುವ, ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಕಟ್ಟಡಗಳು ಮತ್ತು ಭೂಮಿಗಳ ಮೇಲೆ ಸ್ವತ್ತಿನ ಬಂಡವಾಳ ಮೌಲ್ಯದ ಆಧಾರದಲ್ಲಿ ಗ್ರಾಮ ಪಂಚಾಯತಿಗಳು ತೆರಿಗೆ ವಿಧಿಸಲು ಅವಕಾಶ ಕಲ್ಪಿಸಲಾಗಿದೆ.
(ಇ)	ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿ ಏಕರೂಪ ತೆರಿಗೆ ದರ ಇದೆಯೇ; ಇದ್ದಲ್ಲಿ, ವರ್ಗವಾರು ತೆರಿಗೆಯ ವಿವರಗಳೇನು?	ಗ್ರಾಮ ಪಂಚಾಯತಿಗಳಲ್ಲಿ ಏಕರೂಪ ತೆರಿಗೆ ವ್ಯವಸ್ಥೆ ಇರುವುದಿಲ್ಲ. ಆಯಾ ಗ್ರಾಮ ಪಂಚಾಯತಿಗಳು ಸ್ವತ್ತಿನ ಬಂಡವಾಳ ಮೌಲ್ಯದ ಆಧಾರದಲ್ಲಿ ಈ ಕೆಳಕಂಡ ವರ್ಗಗಳಲ್ಲಿ ಭೂಮಿ ಮತ್ತು ಕಟ್ಟಡಗಳ ಮೇಲೆ ತೆರಿಗೆ ವಿಧಿಸಲು ಅವಕಾಶ ಕಲ್ಪಿಸಲಾಗಿದೆ. ತೆರಿಗೆಗೆ ಗುರಿಯಾಗುವ ಸ್ವತ್ತಿನ ಮೂಲ ಮೌಲ್ಯವನ್ನು ಕರ್ನಾಟಕ ಸ್ಟ್ಯಾಂಪ್ ಅಧಿನಿಯಮ, 1957 ರ 45 ಬಿ ಪ್ರಕರಣದ ಅಡಿಯಲ್ಲಿ ಪ್ರಕಟಿಸಲಾದ ಮಾರ್ಗಸೂಚಿ ಮಾರುಕಟ್ಟೆ ಮೌಲ್ಯದಲ್ಲಿ ನಿರ್ಧರಿಸಲಾಗುತ್ತದೆ. 1. ನಿವಾಸಿ ಕಟ್ಟಡಗಳು 2. ವಾಣಿಜ್ಯ ಕಟ್ಟಡಗಳು 3. ಕೈಗಾರಿಕೆಗಳು 4. ಖಾಲಿ ಜಮೀನು 5. ಮೊಬೈಲ್ ಟವರ್‌ಗಳು 6. ವಿಂಡ್ ಮಿಲ್‌ಗಳು 7. ಸೋಲಾರ್ ಪಾರ್ಕ್‌ಗಳು

ಸಂ. ಗ್ರಾಅಪ 734 ಗ್ರಾಪಂಅ 2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು